# ಯೊವಾನ್ನನು ಬರೆದ ಎರಡನೆಯ ಪತ್ರ

## ಮುನ್ನುಡಿ

ಯೊವಾನ್ನನು ಈ ಎರಡನೆಯ ಪತ್ರವನ್ನು ಒಬ್ಬ "ಶ್ರೀಮಾತೆಗೂ ಆಕೆಯ ಮಕ್ಕಳಿಗೂ" ಬರೆದನೆಂದು ಹೇಳಲಾಗಿದೆ. ಇಲ್ಲಿ ಶ್ರೀಮಾತೆ ಮತ್ತು ಆಕೆಯ ಮಕ್ಕಳು ಎಂದರೆ ಒಂದು ಸ್ಥಳೀಯ ಕ್ರೈಸ್ತಸಭೆ ಮತ್ತು ಅದರ ಸದಸ್ಯರು ಎಂಬುದು ಹಲವರ ಅಭಿಪ್ರಾಯ. ಸಭಾಪ್ರಮುಖನಾದ ಲೇಖಕನು ನೆರೆಯ ಸಭೆಗೆ ಅತ್ಯಂತ ಆತ್ಮೀಯತೆಯಿಂದ ಈ ಪುಟ್ಟ ಪತ್ರವನ್ನು ಬರೆದಿದ್ದಾನೆ.

ಜನರು ಒಬ್ಬರನ್ನೊಬ್ಬರು ಪ್ರೀತಿಸಬೇಕು; ಸುಳ್ಳು ಬೋಧಕರ ಬಗ್ಗೆ ಎಚ್ಚರಿಕೆಯಿಂದಿರಬೇಕು – ಇದೇ ಈ ಪತ್ರದ ಸಂದೇಶ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 – 1.3 |
| ಪ್ರೀತಿಯ ಪ್ರಾಮುಖ್ಯತೆ | – | 1.4 – 1.6 |
| ಸುಳ್ಳುಬೋಧಕರ ಬಗ್ಗೆ ಎಚ್ಚರಿಕೆ | – | 1.7 – 1.11 |
| ಸಮಾಪ್ತಿ | – | 1.12 – 1.13 |


**ಪೀಠಿಕೆ**

**1** ದೇವರಿಂದ ಆಯ್ಕೆಯಾದ ಶ್ರೀಮಾತೆಗೂ ಆಕೆಯ ಮಕ್ಕಳಿಗೂ – ಸಭಾಹಿರಿಯನಾದ ನಾನು ಬರೆಯುವ
ಪತ್ರ.
2 ನಮ್ಮಲ್ಲಿ ನೆಲೆಗೊಂಡಿರುವ ಹಾಗೂ ನಮ್ಮಲ್ಲಿ ಶಾಶ್ವತವಾಗಿರುವ ಸತ್ಯದ ಪ್ರಯುಕ್ತ ನಾನು ಮತ್ತು
ಸತ್ಯವನ್ನು ಅರಿತಿರುವ ಎಲ್ಲರು ನಿಮ್ಮಲ್ಲಿ ಪ್ರೀತಿಯನ್ನಿಟ್ಟಿದ್ದೇವೆ. [3]ಪಿತನಾದ ದೇವರಿಂದಲೂ ಅವರ ಪುತ್ರ
ಯೇಸುಕ್ರಿಸ್ತರಿಂದಲೂ ಕೃಪೆ, ಕರುಣೆ, ಶಾಂತಿ, ಸಮಾಧಾನಗಳು ಸತ್ಯಪೂರ್ವಕವಾಗಿಯೂ
ಪ್ರೀತಿಪೂರ್ವಕವಾಗಿಯೂ ನಮ್ಮಲ್ಲಿ ನೆಲೆಸಲಿ !

**ಸತ್ಯ ಮತ್ತು ಪ್ರೀತಿ**

4 ನಿನ್ನ ಮಕ್ಕಳಲ್ಲಿ ಕೆಲವರು ಪಿತನು ವಿಧಿಸಿದಂತೆ ಸತ್ಯಸಂಧರಾಗಿ ನಡೆಯುವುದನ್ನು ಕಂಡು
ನನಗಾದ ಆನಂದ ಅಷ್ಟಿಷ್ಟಲ್ಲ. [5]ಶ್ರೀಮಾತೆಯೇ, ನಾನು ಮಾಡುವ ಬಿನ್ನಹವಿದು: ನಾವು ಒಬ್ಬರನ್ನೊಬ್ಬರು
ಪ್ರೀತಿಸಬೇಕು. ಇದು ಮೊತ್ತಮೊದಲಿನಿಂದಲೂ ನಮಗೆ ಕೊಡಲಾದ ಆಜ್ಞೆಯೇ ಹೊರತು ಹೊಸದೇನೂ
ಅಲ್ಲ. [6]ದೇವರ ಆಜ್ಞೆಗಳನ್ನು ಅನುಸರಿಸಿ ನಡೆಯುವುದೇ ಪ್ರೀತಿ. ಪ್ರೀತಿ ಮಾರ್ಗದಲ್ಲಿ ನಡೆಯಬೇಕೆಂಬುದೇ
ನೀವು ಮೊತ್ತ ಮೊದಲಿನಿಂದಲೂ ಕೇಳಿರುವ ಆಜ್ಞೆ.
7 ಅನೇಕ ಮಂದಿ ವಂಚಕರು ಲೋಕದಲ್ಲಿ ತಲೆದೋರಿದ್ದಾರೆ. ಯೇಸುಕ್ರಿಸ್ತರು ಮನುಷ್ಯ ಆಗಿ
ಬಂದರೆಂಬುದನ್ನು ಇವರು ಒಪ್ಪಿಕೊಳ್ಳುವುದಿಲ್ಲ. ಇಂಥವನು ವಂಚಕನೂ ಕ್ರಿಸ್ತವಿರೋಧಿಯೂ ಹೌದು.

[8]ನಿಮ್ಮ ದುಡಿಮೆಯ ಫಲವನ್ನು ಕಳೆದುಕೊಳ್ಳದೆ ಅದನ್ನು ಪೂರ್ಣವಾಗಿ ಪಡೆಯುವಂತೆ ನೀವು ಎಚ್ಚರಿಕೆ ವಹಿಸಬೇಕು.

9 ಕ್ರಿಸ್ತಯೇಸುವಿನ ಉಪದೇಶದಲ್ಲಿ ನೆಲೆಸದೆ ಅದರ ಎಲ್ಲೆಮೀರಿ ನಡೆಯುವವನಲ್ಲಿ ದೇವರು ಇರುವುದಿಲ್ಲ. ಆ ಉಪದೇಶದಲ್ಲಿ ನೆಲೆಸಿರುವವನಲ್ಲಿ ಪಿತ ಮತ್ತು ಪುತ್ರ ಇಬ್ಬರೂ ಇರುತ್ತಾರೆ. [10]ಈ ಉಪದೇಶವನ್ನು ಒಪ್ಪದಿರುವ ಯಾವನಾದರೂ ನಿಮಗೆ ಉಪದೇಶ ಮಾಡಬಂದರೆ, ಮನೆಯೊಳಗೆ ಸೇರಿಸಬೇಡಿ; ಅವನನ್ನು ಹರಸಲೂಬೇಡಿ. [11]ಏಕೆಂದರೆ, ಹರಸುವವನು ಅವನ ದುಷ್ಕೃತ್ಯಗಳಲ್ಲಿ ಪಾಲುಗಾರನಾಗುತ್ತಾನೆ.

**ಕೊನೆಯ ಮಾತು**

12 ನಾನು ನಿಮಗೆ ತಿಳಿಸಬೇಕಾದ ವಿಷಯಗಳು ಬಹಳಷ್ಟಿವೆ. ಆದರೆ ಅವುಗಳನ್ನು ಕಾಗದ ಪತ್ರಗಳ ಮೂಲಕ ತಿಳಿಸಲು ನನಗೆ ಇಷ್ಟವಿಲ್ಲ. ನಾನೇ ನಿಮ್ಮಲ್ಲಿಗೆ ಬಂದು ನಿಮ್ಮ ಸಂಗಡ ಮಾತನಾಡುವ ನಿರೀಕ್ಷೆ ಇದೆ. ಹೀಗೆ ಮುಖಾಮುಖಿಯಾಗಿ ಮಾತನಾಡುವುದರಿಂದ ಪೂರ್ಣ ಸಂತೋಷವೂ ಆಗುತ್ತದೆ. [13]ದೇವರಿಂದ ಆಯ್ಕೆಯಾದ ನಿನ್ನ ಸಹೋದರಿಯ ಮಕ್ಕಳು ನಿನಗೆ ನಮಸ್ಕಾರ ಹೇಳಿದ್ದಾರೆ.